# ಕರ್ನಾಟಕ ಸರ್ಕಾರ : ಕಾರ್ಮಿಕ ಇಲಾಖೆ

ಸಂ: ಪಿ&ಎಸ್/ಎನ್‌ಎಫ್‌ಹೆಚ್/ಸಿಆರ್–1/2018–19

ಕಾರ್ಮಿಕ ಆಯುಕ್ತರ ಕಚೇರಿ
'ಕಾರ್ಮಿಕ ಭವನ' ಬನ್ನೇರುಘಟ್ಟ ರಸ್ತೆ
ಬೆಂಗಳೂರು–29 – ದಿನಾಂಕ: ೦3.05.2018

## ಸುತ್ತೋಲೆ

**ವಿಷಯ:** ದಿನಾಂಕ 12.05.2018 ರಂದು ಕರ್ನಾಟಕ ವಿಧಾನಸಭಾ ಚುನಾವಣೆಯ ದಿನದಂದು ರಜಾ ಘೋಷಿಸುವ ಬಗ್ಗೆ.

**ಉಲ್ಲೇಖ:**
(1) ಭಾರತ ಚುನಾವಣಾ ಆಯೋಗದ ಪತ್ರ ಸಂಖ್ಯೆ: ಇಸಿಐ/ಪಿಎನ್/22/2018, ದಿನಾಂಕ : 27–03–2018
(2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಟಿಪ್ಪಣಿ ನಂ.ಮುಕಾ/3834/2018 ದಿನಾಂಕ 12.04.2018
(3) ಮುಖ್ಯ ಚುನಾವಣಾಧಿಕಾರಿಯವರ ಕಛೇರಿ ಸಂಖ್ಯೆ: ಸಿಆಸುಇ 01 ಚುರಾಘೋ 2018 ದಿನಾಂಕ: 20–04–2018
(4) ಸರ್ಕಾರದ ಪತ್ರ ಸಂಖ್ಯೆ: ಕಾಇ 2581 ಸ್ವೀಮರ 2018 (ಪತ್ರ) ದಿ:26–04–2018

= = =

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಚುನಾವಣಾ ಆಯೋಗವು **ದಿನಾಂಕ: 12.05.2018 ರ ಶನಿವಾರದಂದು ಕರ್ನಾಟಕ ವಿಧಾನ ಸಭೆಗೆ ಸಾರ್ವತ್ರಿಕ ಚುನಾವಣೆಯ ಪ್ರಕ್ರಿಯೆಯಲ್ಲಿ ಮತದಾನಕ್ಕಾಗಿ ನಿಗಧಿಪಡಿಸಿದೆ.** ಸದರಿ ದಿನದಂದು ರಾಜ್ಯಾದ್ಯಾಂತ ಎಲ್ಲಾ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1951ರ ಪ್ರಜಾ ಪ್ರತಿನಿಧಿ ಕಾಯ್ದೆ, ಸೆಕ್ಷನ್ 135(ಬಿ) ರಡಿಯಲ್ಲಿ ವೇತನ ಸಹಿತ ರಜೆ ಘೋಷಿಸಿ ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸುವುದಕ್ಕಾಗಿ ಎಲ್ಲಾ ಸಂಸ್ಥೆ/ನಿಯೋಜಕರು ಅನುವು ಮಾಡಿಕೊಡಬೇಕಾಗಿರುತ್ತದೆ. ಆದ್ದರಿಂದ, ತಮ್ಮ ವ್ಯಾಪ್ತಿಯಲ್ಲಿ ಬರುವ ಕಾರ್ಮಿಕ ಸಂಘಗಳು/ಮಾಲೀಕರ ಸಂಘಗಳ ಪ್ರತಿನಿಧಿಗಳ ಗಮನಕ್ಕೆ ತರಲು ಸಕಲ ಕ್ರಮಗಳನ್ನು ಕೈಗೊಳ್ಳಲು ಹಾಗೂ ಸರ್ಕಾರದ ಸೂಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸಲು ಈ ಮೂಲಕ ಆದೇಶಿಸಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಸಂಸ್ಥೆ/ನಿಯೋಜಕರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದೆಂದು ಈ ಮೂಲಕ ಸೂಚಿಸಿದೆ.

Chaitra V. 03/05/18
**ಆಯುಕ್ತರು**
**ಕಾರ್ಮಿಕ ಇಲಾಖೆ, ಕರ್ನಾಟಕ ಸರ್ಕಾರ**

ಗೆ:

1) ಎಲ್ಲಾ ಉಪ ಕಾರ್ಮಿಕ ಆಯುಕ್ತರು
2) ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು
3) ಎಲ್ಲಾ ಕಾರ್ಮಿಕ ಅಧಿಕಾರಿಗಳು → ತಮ್ಮ ಅಧೀನದಲ್ಲಿ ಬರುವ ಎಲ್ಲಾ ಹಿರಿಯ ಕಾರ್ಮಿಕ ನಿರೀಕ್ಷಕರು / ಕಾರ್ಮಿಕ ನಿರೀಕ್ಷಕರುಗಳಿಗೆ ಸೂಚಿಸುವುದು

ಪ್ರತಿಯನ್ನು ಮಾಹಿತಿಗಾಗಿ :

1) ಮುಖ್ಯ ಚುನಾವಣಾಧಿಕಾರಿಗಳು, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು
3) ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು
4) ಅಪರ ಕಾರ್ಮಿಕ ಆಯುಕ್ತರು (ಆಡಳಿತ / ಕೈಗಾರಿಕಾ ಬಾಂದವ್ಯ), ಬೆಂಗಳೂರು
5) ಜಂಟಿ ಕಾರ್ಮಿಕ ಆಯುಕ್ತರು (ಕನಿಷ್ಠ ವೇತನ), ಬೆಂಗಳೂರು